**Akashvani : Bangalore**
**Regional Bulletin In Kannada**
**21.05.2024 / 18.40 hrs**

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

**೧. ಪ್ರಜ್ವಲ್ ರೇವಣ್ಣ ಮಹಿಳೆಯರ ಮೇಲಿನ ದೌರ್ಜನ್ಯ ಪ್ರಕರಣದಲ್ಲಿ ನಿಷ್ಪಕ್ಷಪಾತ ತನಿಖೆ ನಡೆಯುತ್ತಿದೆ - ಗೃಹ ಸಚಿವ ಪರಮೇಶ್ವರ್**

**೨. ಮೈಸೂರಿನ ಸಾಲುಂಡಿ ಗ್ರಾಮದಲ್ಲಿ ಕಲುಷಿತ ನೀರು ಸೇವಿಸಿದ ಪ್ರಕರಣ ; ಜಿಲ್ಲಾಧಿಕಾರಿಯಿಂದ ಪರಿಶೀಲನೆ**

**೩. ದ್ವಿತೀಯ ಪಿಯುಸಿ ಪರೀಕ್ಷೆ-೨ ಫಲಿತಾಂಶ ಪ್ರಕಟ**

**೪. ರಾಜ್ಯದ ಹಲವೆಡೆ ಮುಂದಿನ ೬ ದಿನ ಗುಡುಗು ಸಹಿತ ಮಳೆ ; ಹವಾಮಾನ ಇಲಾಖೆ ಮುನ್ಸೂಚನೆ**

**೫. ಐಪಿಎಲ್ ಕ್ರಿಕೆಟ್ : ಇಂದು ಕೋಲ್ಕತಾ ನೈಟ್ ರೈಡರ್ಸ್-ಸನ್ ರೈಸರ್ಸ್ ಹೈದರಾಬಾದ್ ನಡುವೆ ಮೊದಲ ಕ್ವಾಲಿಫೈಯರ್ ಪಂದ್ಯ**

**<><*<><>*><>**

ಮಹಿಳೆಯರ ಮೇಲಿನ ದೌರ್ಜನ್ಯ ಆರೋಪ ಎದುರಿಸುತ್ತಿರುವ ಸಂಸದ ಪ್ರಜ್ವಲ್ ರೇವಣ್ಣ ಪ್ರಕರಣದಲ್ಲಿ ಎಸ್ಐಟಿ ಗೆ ಸರ್ಕಾರ ಸಂಪೂರ್ಣ ಸ್ವಾತಂತ್ರ್ಯ ಕೊಟ್ಟಿದ್ದು ನಿಷ್ಪಕ್ಷಪಾತ ತನಿಖೆ ನಡೆಯುತ್ತಿದೆ ಎಂದು ವಿಧಾನಸೌಧದಲ್ಲಿ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ. ಪ್ರಜ್ವಲ್ ವಿದೇಶದಲ್ಲಿದ್ದು ಎಸ್ಐಟಿ ವಿಚಾರಣೆಗೆ ಹಾಜರಾಗುತ್ತಿಲ್ಲ. ಈ ಹಿನ್ನೆಲೆಯಲ್ಲಿ ಪ್ರಜ್ವಲ್ ರೇವಣ್ಣ ರಾಜತಾಂತ್ರಿಕ ಪಾಸ್‌ಪೋರ್ಟ್ ರದ್ದು ಮಾಡುವಂತೆ ಕೇಂದ್ರ ಸರ್ಕಾರಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ರ ಬರೆದಿದ್ದಾರೆ. ಸಿಎಂ ಪತ್ರಕ್ಕೆ ಕೇಂದ್ರ ಸರ್ಕಾರ ಸ್ಪಂದಿಸಬೇಕು ಎಂದು ಹೇಳಿದ್ದಾರೆ.

**<><*<><>*><>**

ಮೈಸೂರಿನ ಕೆ. ಸಾಲುಂಡಿ ಗ್ರಾಮದಲ್ಲಿ ಕಲುಷಿತ ನೀರು ಸೇವಿಸಿ ಸಾವನ್ನಪ್ಪಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಆರೋಗ್ಯಾಧಿಕಾರಿ ಜೊತೆ ದೂರವಾಣಿ ಮೂಲಕ ಮಾತನಾಡಿ ಮಾಹಿತಿ ಪಡೆದುಕೊಂಡರು. ನೀರು ಕಲುಷಿತಗೊಳ್ಳಲು ಕಾರಣವೇನು ಎಂಬುದನ್ನು ಪತ್ತೆ ಹಚ್ಚಿ ಸೂಕ್ತ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಕಲುಷಿತ ನೀರು ಸೇವನೆಯಿಂದ ಅಸ್ವಸ್ಥರಾಗಿ ಆಸ್ಪತ್ರೆಗೆ ದಾಖಲಾಗಿರುವವರ ಚಿಕಿತ್ಸೆಗೆ ಸೂಕ್ತ ವ್ಯವಸ್ಥೆ ಮಾಡುವಂತೆ ಆದೇಶಿಸಿದರು. ಸಾಂಕ್ರಾಮಿಕ ರೋಗ ಹರಡದಂತೆ ಮುನ್ನೆಚ್ಚರಿಕೆ ಕ್ರಮವಾಗಿ ಮೈಸೂರು ತಾಲೂಕಿನ ಜಯಪುರ ಹೋಬಳಿಯ ಕೆ.ಸಾಲುಂಡಿ ಗ್ರಾಮಕ್ಕೆ ಜಿಲ್ಲಾಧಿಕಾರಿ ಡಾ ಕೆ.ವಿ.ರಾಜೇಂದ್ರ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ಸಂದರ್ಭದಲ್ಲಿ ಕುಡಿಯುವ ನೀರಿನ ಬಗ್ಗೆ ಜನರು ಹೆಚ್ಚಿನ ಕಾಳಜಿ ವಹಿಸಬೇಕು. ಜತೆಗೆ ಸುತ್ತಲಿನ ಪರಿಸರವನ್ನು ಸ್ವಚ್ಛತೆಯಿಂದಿಟ್ಟುಕೊಳ್ಳುವಂತೆ ತಿಳಿಸಿದರು. ಸಾಲುಂಡಿ ಗ್ರಾಮದಲ್ಲಿ ಕಲುಷಿತ ನೀರು ಕುಡಿದು ಓರ್ವ ವ್ಯಕ್ತಿ ಮೃತಪಟ್ಟಿರುವ ಬಗ್ಗೆ ವರದಿಯಾಗಿತ್ತು.

**<><*<><>*><>**

ದ್ವಿತೀಯ ಪಿಯುಸಿ ಪರೀಕ್ಷೆ-೨ ಫಲಿತಾಂಶ ಪ್ರಕಟವಾಗಿದೆ. ಕರ್ನಾಟಕ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಳಿಯಿಂದ ಫಲಿತಾಂಶ ಪ್ರಕಟಗೊಂಡಿದ್ದು, ಪರೀಕ್ಷೆ-೨ ರಲ್ಲಿ ಒಟ್ಟಾರೆ ಫಲಿತಾಂಶ ೩೫.೨೫% ಬಂದಿದೆ. ಏಪ್ರಿಲ್ ೨೯ ರಿಂದ ಮೇ ೧೬ರವರೆಗೆ ಪರೀಕ್ಷೆಗಳು ನಡೆದಿತ್ತು. ಇಲಾಖೆ ವೆಬ್ ಸೈಟ್ ಇಚಿಡಿಡಿesuಟಣs.ಟಿಛಿ.iಟಿ ನಲ್ಲಿ ಫಲಿತಾಂಶ ಲಭ್ಯವಾಗಲಿದೆ. ಪರೀಕ್ಷೆಗೆ ಒಟ್ಟು ೧ ಲಕ್ಷ ೪೮ ಸಾವಿರದ ೯೪೨ ವಿದ್ಯಾರ್ಥಿಗಳು ಹಾಜರಾಗಿದ್ದು, ಇದರಲ್ಲಿ ೫೨ ಸಾವಿರದ ೫೦೫ ವಿದ್ಯಾರ್ಥಿಗಳು ಪಾಸ್ ಆಗಿದ್ದಾರೆ. ಬಾಲಕರು ೨೬ ಸಾವಿರದ ೪೯೬ ಮತ್ತು ೨೬ ಸಾವಿರದ ೯ ಬಾಲಕಿಯರು ತೇರ್ಗಡೆ ಆಗಿದ್ದಾರೆ. ಕಲಾ ವಿಭಾಗದಲ್ಲಿ ೧೧ ಸಾವಿರದ ೫೮೯ ವಾಣಿಜ್ಯ ವಿಭಾಗದಲ್ಲಿ ೮ ಸಾವಿರದ ೭೦೯ ಮತ್ತು ವಿಜ್ಞಾನ ವಿಭಾಗದಲ್ಲಿ-೩೨ ಸಾವಿರದ ೨೦೬ ವಿದ್ಯಾರ್ಥಿಗಳು ಪಾಸ್ ಆಗಿದ್ದಾರೆ. ಪರೀಕ್ಷೆ-೨ರಲ್ಲಿ ಫಲಿತಾಂಶ ಸುಧಾರಣೆ ಬಯಸಿ ೩೨ ಸಾವಿರದ ೯೪೦ ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದಾರೆ.

**<><*<><>*><>**

ಜನರಿಗೆ ಆರೋಗ್ಯ ಸೇವೆಗಳನ್ನು ಒದಗಿಸುವ ನಿಟ್ಟಿನಲ್ಲಿ ಹುಬ್ಬಳ್ಳಿಯಲ್ಲಿ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆ ಸ್ಥಾಪಿಸಲಾಗುತ್ತಿದೆ ಎಂದು ಶಾಸಕ ಅರವಿಂದ ಬೆಲ್ಲದ್ ಹೇಳಿದ್ದಾರೆ. ಹುಬ್ಬಳ್ಳಿಯಲ್ಲಿ ಜಯದೇವ ಹೃದ್ರೋಗ ವಿಜ್ಞಾನ

ಮತ್ತು ಸಂಶೋಧನಾ ಸಂಸ್ಥೆಯ ಕಟ್ಟಡ ಕಾಮಗಾರಿ ವೀಕ್ಷಿಸಿ ಮಾತನಾಡಿದ ಅವರು, ಕಳೆದ ವರ್ಷ ಕಾಮಗಾರಿ ಆರಂಭವಾಗಿದ್ದು ಮುಂದಿನ ವರ್ಷದೊಳಗೆ ಪೂರ್ಣಗೊಳ್ಳಲಿದೆ ಎಂದು ಹೇಳಿದರು.

**<><*<><>*><>**

ಶೀಘ್ರದಲ್ಲೇ ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಯಲಿದ್ದು, ಜನರ ಕೈಗೆ ಅಧಿಕಾರ ಸಿಗಲಿದೆ. ಹೀಗಾಗಿ ಪಕ್ಷದ ನಾಯಕರು, ಕಾರ್ಯಕರ್ತರು ಚುನಾವಣೆಗಳಿಗೆ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಕೆಪಿಸಿಸಿ ಅಧ್ಯಕ್ಷರು ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಕರೆ ನೀಡಿದ್ದಾರೆ. ಕೆಪಿಸಿಸಿ ಕಚೇರಿಯಲ್ಲಿ ನಡೆದ ಮಾಜಿ ಪ್ರಧಾನಿ ರಾಜೀವ್ ಗಾಂಧಿ ಅವರ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ಪಕ್ಷದ ಸಂಘಟನೆ ಬಲಗೊಳಿಸಬೇಕು. ಪಕ್ಷದ ಎಲ್ಲಾ ಘಟಕಗಳನ್ನು ವಿಸರ್ಜಿಸಿ ಹೊಸದಾಗಿ ರಚಿಸುವ ಸಮಯ ಬಂದಿದೆ ಎಂದು ಹೇಳಿದರು. ಅಧಿಕಾರ ಬಿಟ್ಟು ಹೋಗುವ ಮುನ್ನ ಪಕ್ಷದ ಸಂಘಟನೆಗೆ ಭದ್ರ ಬುನಾದಿ ಹಾಕಿಕೊಡುವ ಕೆಲಸ ಮಾಡುತ್ತೇನೆ ಎಂದು ತಿಳಿಸಿದರು.

**<><*<><>*><>**

ಶೀಘ್ರದಲ್ಲೇ ತನ್ನ ಆಂತರಿಕ ಕಚ್ಚಾಟದಿಂದ ರಾಜ್ಯ ಸರ್ಕಾರ ಪತನವಾಗಲಿದೆ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರೇ ರಾಜ್ಯದಿಂದ ಪ್ರಧಾನಿ ಅಭ್ಯರ್ಥಿ ಯಾರೂ ಇಲ್ಲ ಎಂದಿರುವುದು ನಾಯಕತ್ವದ ಮುಸುಕಿನ ಗುದ್ದಾಟಕ್ಕೆ ಸಾಕ್ಷಿಯಾಗಿದೆ ಎಂದು ತಿಳಿಸಿದರು. ಲೋಕಸಭಾ ಚುನಾವಣೆಯಲ್ಲಿ ರಾಜ್ಯದಲ್ಲಿ ಬಿಜೆಪಿ ಹಾಗೂ ಜೆಡಿಎಸ್ ಮೈತ್ರಿಕೂಟದ ೨೫ ಅಭ್ಯರ್ಥಿಗಳು ಗೆಲುವು ಸಾಧಿಸಲಿದ್ದು, ಕಾಂಗ್ರೆಸ್ ಕೇವಲ ೨ ಸ್ಥಾನಗಳಿಗೆ ತೃಪ್ತಿ ಪಡಬೇಕಾಗುತ್ತದೆ. ಜನರು ಮೋದಿ ಕೈ ಬಲಪಡಿಸುವುನ್ನು ಯಾರಿಂದಲೂ ತಪ್ಪಿಸಲು ಸಾಧ್ಯವಿಲ್ಲ ಅವರು ಹೇಳಿದರು.

**<><*<><>*><>**

ಚಿಕ್ಕಮಗಳೂರು ಜಿಲ್ಲೆಯಲ್ಲಿ ಬಾಲ್ಯ ವಿವಾಹ ಪ್ರಕರಣಗಳನ್ನು ಸಂಪೂರ್ಣವಾಗಿ ನಿಯಂತ್ರಿಸಲು ಅಧಿಕಾರಿಗಳು ಎಲ್ಲಾ ರೀತಿಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಮೀನಾ ನಾಗರಾಜ್ ಹೇಳಿದ್ದಾರೆ. ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ನಡೆದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಭೆಯಲ್ಲಿ ಮಾತನಾಡಿದ ಅವರು, ೨೦೨೩-೨೪ನೇ ಸಾಲಿನ ಬಾಲ್ಯ ವಿವಾಹದಲ್ಲಿ ೫೮ ದೂರುಗಳನ್ನು ಸ್ವೀಕರಿಸಲಾಗಿದೆ. ಅದರಲ್ಲಿ ೫೦ ಪ್ರಕರಣಗಳನ್ನು ತಡೆ ಹಿಡಿದು ಉಳಿದ ೮ ಪ್ರಕರಣಗಳು ನ್ಯಾಯಾಲಯದ ಹಂತದಲ್ಲಿದೆ ಎಂದರು. ಮಹಿಳೆಯರ ಮತ್ತು ಮಕ್ಕಳ ಸಾಗಾಟ ನಿವಾರಣೆ ಯೋಜನೆಯಲ್ಲಿ ಹಲವಾರು ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಅವರು ತಿಳಿಸಿದ್ದಾರೆ.

**<><*<><>*><>**

ಪ್ರಸಕ್ತ ಮುಂಗಾರು ಹಂಗಾಮಿಗೆ ಜಿಲ್ಲೆಯ ರೈತರಿಗೆ ಅಗತ್ಯವಿರುವ ಬಿತ್ತನೆ ಬೀಜ, ರಸಗೊಬ್ಬರ ಸಮರ್ಪಕ ಪೂರೈಕೆಗೆ ಕ್ರಮಕೈಗೊಳ್ಳುವಂತೆ ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಮುಂಗಾರು ಹಂಗಾಮಿನ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪ್ರಸಕ್ತ ಹಂಗಾಮಿಗೆ ಬಿತ್ತನೆ ಬೀಜ, ರಸಗೊಬ್ಬರ ಅಭಾವವಾಗದಂತೆ ಮುಂಜಾಗ್ರತಾ ಕ್ರಮವಹಿಸಬೇಕು. ಅಧಿಕಾರಿಗಳು ರೈತ ಸಂಪರ್ಕ ಕೇಂದ್ರಗಳಿಗೆ ಭೇಟಿ ನೀಡಿ ವಿತರಣೆ ಹಾಗೂ ದಾಸ್ತಾನು ಪರಿಶೀಲಿಸಲು ಸೂಚಿಸಿದರು. ನಕಲಿ ಬೀಜ, ಗೊಬ್ಬರ ವಿತರಣೆ ಆಗದಂತೆ ಕಟ್ಟೆಚ್ಚರ ವಹಿಸಬೇಕು. ಗೊಬ್ಬರ ಮತ್ತು ಬೀಜದ ಕೃತಕ ಅಭಾವ ಸೃಷ್ಟಿಯಾಗದಂತೆ ಮುಂಜಾಗ್ರತಾ ಕ್ರಮವಹಿಸಬೇಕು ಎಂದು ಜಂಟಿ ಕೃಷಿ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಆದೇಶಿಸಿದರು. ಜಿಲ್ಲೆಗೆ ಪೂರೈಕೆಯಾದ ಬೀಜ, ರಸಗೊಬ್ಬರ ಬೇರೆ ಜಿಲ್ಲೆಗೆ ಹೋಗದಂತೆ ನಿಗಾವಹಿಸಲು ತಿಳಿಸಿದ ಅವರು ಬಿತ್ತನೆ ಬೀಜಗಳ ಪ್ಯಾಕ್ ಮೇಲೆ ಕ್ಯೂಆರ್ ಕೋಡ್ ಅಳವಡಿಸಲಾಗಿದ್ದು, ಸ್ಕ್ಯಾನ್ ಮಾಡಿ ವಿತರಣೆ ಮಾಡಲಾಗುತ್ತಿದೆ. ರೈತರು ತಾವು ಪಡೆದ ಬಿತ್ತನೆ ಬೀಜಕ್ಕೆ ಕಡ್ಡಾಯವಾಗಿ ರಸೀದಿ ಪಡೆದುಕೊಳ್ಳುವಂತೆ ಹೇಳಿದರು.

**<><*<><>*><>**

ದಾವಣಗೆರೆ ಜಿಲ್ಲಾದ್ಯಂತ ಕಳೆದ ರಾತ್ರಿ ವ್ಯಾಪಕ ಮಳೆಯಾಗಿದ್ದು, ಭತ್ತ ಮತ್ತು ಇತರೆ ಬೆಳೆಗಳಿಗೆ ಹಾನಿ ಸಂಭವಿಸಿದೆ. ಚನ್ನಗಿರಿ, ಹರಿಹರ, ಮಾಯಕೊಂಡ, ಆನಗೋಡು ಬಸವಾಪಟ್ಟಣ ಸೇರಿದಂತೆ ಹಲವೆಡೆ ಬಿರುಗಾಳಿ ಸಹಿತ ಧಾರಾಕಾರ ಮಳೆಯಾಗಿದ್ದು, ಕೊಯ್ಲಿಗೆ ಬಂದಿದ್ದ ನೂರಾರು ಹೆಕ್ಟೇರ್ ಪ್ರದೇಶದಲ್ಲಿ ಭತ್ತ, ಅಡಿಕೆ, ತೆಂಗು, ಬಾಳೆ ಬೆಳೆಗೆ ಹಾನಿಯಾಗಿದೆ.

**<><*<><>*><>**

ಜಪಾನಿನ ಮಿಯಾವಾಕಿ ವಿಧಾನದ ಮೂಲಕ ಗಿಡಬೆಳೆಸಿ ದಟ್ಟಹಸಿರನ್ನು ಹೆಚ್ಚಿಸುವ ಪ್ರಯೋಗವನ್ನು ಚಿಕ್ಕಮಗಳೂರಿನ ಪರಿಸರ ಪ್ರೇಮಿಗಳು ಮಾಡುತ್ತಿದ್ದು ಮೊದಲ ಹಂತಕ್ಕೆ ಚಾಲನೆ ನೀಡಿದ್ದಾರೆ. ಪರಿಸರ ಕುರಿತು ಹೆಚ್ಚಿನ ಕಾಳಜಿ ಹೊಂದಿರುವ ಅರಳಗುಪ್ಪೆ ಕುಟುಂಬ, ತೊಗರಿಹಂಕಲ್ ಹಾಗೂ ನಿರ್ವಾಣಸ್ವಾಮಿ ಮಠದ ಮನೆಯ ಮೂರು ಕುಟುಂಬಗಳು ಕೈಮರ ಹೊಸಹಳ್ಳಿ ಗ್ರಾಮದಲ್ಲಿ ಮೊದಲ ಹಂತದಲ್ಲಿ ೬೦೦ ಗಿಡ ನೆಡುವ ಕಾರ್ಯಕ್ಕೆ ಚಾಲನೆ ನೀಡಿದ್ದಾರೆ. ಮಾವು, ಹಲಸು, ಪನ್ನೇರಳೆ, ಹುಣಸೆ, ನೆಲ್ಲಿ, ಸೀಬೆ, ಸಂಪಿಗೆ, ಮತ್ತಿ ಸೇರಿ ಹಲವು ಜಾತಿಯ ಸಸಿಗಳನ್ನು ನೆಟ್ಟು ಜಪಾನಿನ ಮಿಯಾವಾಕಿ ವಿಧಾನದ ಮೂಲಕ ಗಿಡಬೆಳೆಸಿ ಕಿರು ಅರಣ್ಯ ನಿರ್ಮಿಸುವ ಯೋಜನೆ ಇದಾಗಿದೆ ಎಂದು ಪರಿಸರ ಪ್ರೇಮಿಗಳು ಹೇಳಿದ್ದಾರೆ.

<><*<><>*><>

ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್ ಅಧ್ಯಕ್ಷತೆಯಲ್ಲಿ ರಾಜ್ಯದ ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರದ ವತಿಯಿಂದ ಆಯಾ ವ್ಯಾಪ್ತಿಯಲ್ಲಿ ನಡೆದಿರುವ ಕಾಮಗಾರಿಗಳು ಮತ್ತು ಯೋಜನೆಗಳ ಪ್ರಗತಿ ಕುರಿತಂತೆ ಪ್ರಾಧಿಕಾರಗಳ ಆಯುಕ್ತರೊಂದಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಪರಿಶೀಲನಾ ಸಭೆ ನಡೆಯಿತು. ನಗರಾಭಿವೃದ್ಧಿ ಇಲಾಖೆಯ ಕಾರ್ಯದರ್ಶಿ ದೀಪ ಚೋಳನ್, ನಗರ ಮತ್ತು ಗ್ರಾಮಾಂತರ ಯೋಜನಾ ಆಯುಕ್ತಾಲಯದ ಆಯುಕ್ತರಾದ ವೆಂಕಟಾಚಲಪತಿ, ನಿರ್ದೇಶಕರಾದ ತಿಪ್ಪೇಸ್ವಾಮಿ, ನಗರಾಭಿವೃದ್ಧಿ ಇಲಾಖೆಯ ಉಪ ಕಾರ್ಯದರ್ಶಿ ಕೃಷ್ಣಮೂರ್ತಿ ಸೇರಿದಂತೆ ಇತರೆ ಅಧಿಕಾರಿಗಳು ಭಾಗವಹಿಸಿದ್ದರು.

<><*<><>*><>

೨೦೨೩ನೇ ಸಾಲಿನ ಮುಂಗಾರು ಹಂಗಾಮಿನ ಬರ ಪರಿಸ್ಥಿತಿಯಿಂದ ಉಂಟಾದ ಬೆಳೆಹಾನಿಗೆ ಎಸ್‌ಡಿಆರ್‌ಎಫ್ ಮತ್ತು ಎನ್‌ಡಿಆರ್‌ಎಫ್ ನಿಯಮಾವಳಿ ಅನ್ವಯ ಈಗಾಗಲೇ ಸರ್ಕಾರ ಅರ್ಹ ರೈತರಿಗೆ ಪರಿಹಾರ ಹಣ ಬಿಡುಗಡೆ ಮಾಡಿದೆ. ಪರಿಹಾರ ಹಣ ಜಮೆ ಆಗದೆ ಇದ್ದ ರೈತರು ತಕ್ಷಣವೇ ನಾಡಕಚೇರಿ ಇಲ್ಲವೇ ತಹಶೀಲ್ದಾರ್ ಕಚೇರಿಗಳಲ್ಲಿ ಅಗತ್ಯ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸುವಂತೆ ಹಾವೇರಿ ಜಿಲ್ಲೆ ಹಾನಗಲ್ ಶಾಸಕ ಶ್ರೀನಿವಾಸ ಮಾನೆ ತಿಳಿಸಿದ್ದಾರೆ. ಹಾನಗಲ್ ತಹಶೀಲ್ದಾರ್ ಕಚೇರಿಯಲ್ಲಿ ಈ ಕುರಿತು ಸಹಾಯವಾಣಿ ತೆರೆಯಲಾಗಿದ್ದು, ದೂರವಾಣಿ ಸಂಖ್ಯೆ ೦೮೩೭೯-೨೬೨೨೪೧ ಸಂಪರ್ಕಿಸಿ ಮಾಹಿತಿ ಪಡೆದುಕೊಳ್ಳುವಂತೆ ಶ್ರೀನಿವಾಸ ಮಾನೆ ಮನವಿ ಮಾಡಿದ್ದಾರೆ.

<><*<><>*><>

**ಸಂಕ್ಷಿಪ್ತ ಸುದ್ದಿಗಳು**

೧. ಹಾವೇರಿಯ ಗುದ್ಲೆಪ್ಪ ಹಳ್ಳಿಕೇರಿ ಪದವಿ ಪೂರ್ವ ಕಾಲೇಜಿನಲ್ಲಿ ಇದೇ ೨೪ ರಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ನ್ಯಾಯವಾದಿಗಳ ಸಂಘ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಯುವ ರೆಡ್ ಕ್ರಾಸ್ ಘಟಕದ ಸಹಯೋಗದಲ್ಲಿ "ವಿಶ್ವ ಸ್ಕಿಜೋಫ್ರೇನಿಯಾ ದಿನಾಚರಣೆ" ಜರುಗಲಿದೆ.

೨. ಕೋಲಾರ ಜಿಲ್ಲೆಯ ಮಾಲೂರು ತಾಲೂಕಿನ ತೊರ್ನಹಳ್ಳಿಯಲ್ಲಿ ಶ್ರೀ ದ್ರೌಪತಾಂಭ ದೇವಿ ಹಾಗೂ ಶ್ರೀಧರ್ಮರಾಯ ಸ್ವಾಮಿಯ ೫೮ನೇ ವರ್ಷದ ಹೂವಿನ ಕರಗಮಹೋತ್ಸವ ಅದ್ದೂರಿಯಾಗಿ ನೆರವೇರಿತು. ಸಾವಿರಾರು ಮಂದಿ ಐತಿಹಾಸಿಕ ಹೂವಿನ ಕರಗವನ್ನು ಕಣ್ತುಂಬಿಕೊಂಡರು. ಕರಗವು ಎಲ್ಲಾ ದೇವಾಲಯಗಳು, ದರ್ಗಾ ಸೇರಿದಂತೆ ಊರಿನ ತುಂಬೆಲ್ಲ ಸಂಚರಿಸಿ ಪೂಜೆ ಸ್ವೀಕರಿಸಿತು.

೩. ವಿಜಯನಗರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸೇರಿದಂತೆ ವಿವಿಧ ಸಂಸ್ಥೆಗಳ ಸಹಯೋಗದೊಂದಿಗೆ ವಿಶ್ವ ಸುಲಭ ಲಭ್ಯತಾ ಅರಿವು ದಿನಾಚರಣೆಯನ್ನು ಹೊಸಪೇಟೆ ನಗರದ ಜೆಪಿ ಭವನದಲ್ಲಿ ಹಮ್ಮಿಕೊಳ್ಳಲಾಗಿತ್ತು, ಕಾರ್ಯಕ್ರಮದ ಉದ್ಘಾಟನೆಯನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ಕುಮಾರಿ ಶ್ವೇತಾ.ಎಸ್. ನೆರವೇರಿಸಿದರು.

೪. ಕೋಲಾರದ ರಂಗಮಂದಿರದಲ್ಲಿ ಬುಡ್ಡಿದೀಪ ಸಾಂಸ್ಕೃತಿಕ ಸಂಘಟನೆಯ ವತಿಯಿಂದ ಶ್ರೀರಾಮರೆಡ್ಡಿ ವೇದಿಕೆಯಲ್ಲಿ ಆಯೋಜಿಸಿದ್ದ ನೆಲಗಮಲು ಮಕ್ಕಳ ನಾಟಕೋತ್ಸವ ಪ್ರದರ್ಶನವು ಸಮಾರೋಪಗೊಂಡಿದೆ.

೫. ೨೦೨೪ರಲ್ಲಿ ಕಳುವಾಗಿದ್ದ ೧೬ ಲಕ್ಷ ರೂಪಾಯಿ ಮೌಲ್ಯದ ೭೪ ವಿವಿಧ ಕಂಪನಿಯ ಮೊಬೈಲ್‌ಗಳನ್ನು ಪತ್ತೆ ಹಚ್ಚಿ ವಾರಸುದಾರರಿಗೆ ವಿತರಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಪೊಲೀಸ್ ವರಿ?ಧಿಕಾರಿ ಜಿ.ಸಂಗೀತಾ ಹೇಳಿದರು.

೬. ಚಿತ್ರದುರ್ಗದಲ್ಲಿನ ದಾವಣಗೆರೆ ವಿಶ್ವವಿದ್ಯಾಲಯದ ಜ್ಞಾನಗಂಗೋತ್ರಿ ಸ್ನಾತಕೋತ್ತರ ಕೇಂದ್ರದಲ್ಲಿ ಎನ್‌ಎಸ್‌ಎಸ್ ಘಟಕ-೧ ಮತ್ತು ಐಮಂಗಲ ಪೊಲೀಸ್ ತರಬೇತಿ ಶಾಲೆಯ ಸಹಯೋಗದಲ್ಲಿ ಸ್ವಚ್ಛತಾ ಕಾರ್ಯಕ್ರಮ, ಹೊಸ ಅಪರಾಧಿಕ ಕಾನೂನುಗಳ ಅರಿವು ಮತ್ತು ಬಸವ ಜಯಂತಿ ಕಾರ್ಯಕ್ರಮ ನಡೆಯಿತು.

೭. ಬೆಂಗಳೂರಿನಲ್ಲಿ ಯುವ ಕಾಂಗ್ರೆಸ್ ವತಿಯಿಂದ ರೇಸ್‌ಕೋರ್ಸ್ ರಸ್ತೆಯಲ್ಲಿರುವ ಕಾಂಗ್ರೆಸ್ ಭವನದಲ್ಲಿ ಮಾಜಿ ಪ್ರಧಾನಿ ರಾಜೀವ್ ಗಾಂಧಿ ಪುಣ್ಯ ಸ್ಮರಣೆಯ ಅಂಗವಾಗಿ ರಕ್ತದಾನ ಶಿಬಿರ ಹಮ್ಮಿಕೊಳ್ಳಲಾಗಿದೆ.

೮. ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತದ ವತಿಯಿಂದ ಮಾಜಿ ಪ್ರಧಾನಿ ರಾಜೀವ್ ಗಾಂಧಿ ಅವರ ಪುಣ್ಯಸ್ಮರಣೆಯ ಅಂಗವಾಗಿ "ಭಯೋತ್ಪಾದನಾ ವಿರೋಧಿ ದಿನ ಆಚರಿಸಲಾಯಿತು. ಜಿಲ್ಲಾಧಿಕಾರಿ ಡಾ.ಎನ್ ಶಿವಶಂಕರ "ಭಯೋತ್ಪಾದನಾ ವಿರೋಧಿ ಪ್ರತಿಜ್ಞಾ ವಚನ" ಬೋಧಿಸಿದರು.

<><*<><>*><>

ರಾಜ್ಯದ ಕರಾವಳಿ ಮತ್ತು ದಕ್ಷಿಣ ಒಳನಾಡಿನ ಹಲವು ಕಡೆಗಳಲ್ಲಿ ಉತ್ತರ ಒಳನಾಡಿನ ಒಂದೆರಡು ಕಡೆಗಳಲ್ಲಿ ಮಳೆಯಾದ ಬಗ್ಗೆ ವರದಿಯಾಗಿದೆ. ಧರ್ಮಸ್ಥಳದಲ್ಲಿ ೧೫ ಸೆಂಟಿಮೀಟರ್, ಯಲ್ಲಾಪುರ, ಚಾಮರಾಜನಗರದಲ್ಲಿ ೧೦, ಸಂತೆಬೆನ್ನೂರು ೮, ಕೊಪ್ಪ, ಲಕ್ಷ್ಮೇಶ್ವರ್, ಶಿವಮೊಗ್ಗದ ಹುಂಚದಕಟ್ಟೆ, ಉಪ್ಪಿನಂಗಡಿ, ಪಣಂಬೂರು, ಮಂಗಳೂರಿನಲ್ಲಿ ತಲಾ ೭ ಸೆಂಟಿಮೀಟರ್ ಮಳೆಯಾಗಿದೆ. ಮುಂಡಗೋಡು, ಗೋಕರ್ಣದಲ್ಲಿ ತಲಾ ೫ ಸೆಂಟಿಮೀಟರ್ ಮಳೆಯಾಗಿದೆ ಎಂದು ಹವಾಮಾನ ಇಲಾಖೆ

ತಿಳಿಸಿದೆ. ಈ ನಡುವೆ ಮುಂದಿನ ೭ ದಿನಗಳ ಕಾಲ ದಕ್ಷಿಣ ಕನ್ನಡ, ಉಡುಪಿ ಜಿಲ್ಲೆಯಲ್ಲಿ ಗುಡುಗು ಸಹಿತ ಭಾರೀ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಕೊಡಗು, ಚಿಕ್ಕಮಗಳೂರು, ಶಿವಮೊಗ್ಗ ಹಾಗೂ ಚಿತ್ರದುರ್ಗ ಜಿಲ್ಲೆಯಲ್ಲಿ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ. ಉತ್ತರ ಕರ್ನಾಟಕದ ಹಲವು ಜಿಲ್ಲೆಗಳಲ್ಲಿಯೂ ಮಳೆಯಾಗುವ ಮುನ್ಸೂಚನೆ ನೀಡಲಾಗಿದೆ. ಬೆಂಗಳೂರು ಸುತ್ತಮುತ್ತ ಮೋಡಕವಿದ ವಾತಾವರಣವಿದ್ದು, ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ.

**<><*<><>*><>**

ಐಪಿಎಲ್ ಕ್ರಿಕೆಟ್ ನಲ್ಲಿಂದು ಅಹಮದಾಬಾದ್‌ನ ನರೇಂದ್ರಮೋದಿ ಕ್ರೀಡಾಂಗಣದಲ್ಲಿ ನಡೆಯುವ ಮೊದಲ ಕ್ವಾಲಿಫೈಯರ್ ಪಂದ್ಯದಲ್ಲಿ ಕೋಲ್ಕತಾ ನೈಟ್ ರೈಡರ್ಸ ಹಾಗೂ ಸನ್ ರೈಸರ್ಸ ಹೈದರಾಬಾದ್ ನಡುವೆ ಹಣಾಹಣಿ ನಡೆಯಲಿದೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ. ಇಂದು ಗೆಲ್ಲುವ ತಂಡ ನೇರವಾಗಿ ಫೈನಲ್ ತಲುಪಲಿದ್ದು, ಸೋಲುವ ತಂಡಕ್ಕೆ ಫೈನಲ್ ತಲುಪಲು ಮತ್ತೊಂದು ಅವಕಾಶ ಸಿಗಲಿದೆ.